## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಶ್ರೀ ಎಸ್.ವಿ. ಪದ್ಮನಾಭ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಪಂ ಶ್ರೀರಂಗಪಟ್ಟಣ ಇವರ ಅಮಾನತ್ತಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ:-1) ಕಾರಣ ಕೇಳುವ ನೋಟೀಸು ಸಂಖ್ಯೆ: ಗ್ರಾಅಪ 146 ವಿಸೇಬಿ 2010 ದಿನಾಂಕ: 11-05-2011.

2) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 146 ವಿಸೇಬಿ 2010 ದಿನಾಂಕ: 14-06-2011.

3) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 146 ವಿಸೇಬಿ 2010 ದಿನಾಂಕ: 11-11-2011.

4) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 146 ವಿಸೇಬಿ 2010 ದಿನಾಂಕ: 26-06-2015.

5) ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:6471/201ರ ತೀರ್ಪು ದಿನಾಂಕ 06-12-2016.

6) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 216 ವಿಸೇಬಿ 2015 ದಿನಾಂಕ 05-05-2017.

7) ಶ್ರೀ ಎಸ್.ವಿ. ಪದ್ಮನಾಭ ಇವರ ಮನವಿ ದಿ:18-05-2017

* * * *

ಪ್ರಸ್ತಾವನೆ:-

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಸೋಲಾರ ಯುಪಿಎಸ್, ಪ್ರಚಾರ ಸಾಮಗ್ರಿಗಳು ಮತ್ತು ಇನ್ನಿತರೆ ವಸ್ತುಗಳನ್ನು ಹಾಗೂ ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ ತ್ಯಾಜ್ಯ ವಸ್ತುಗಳ ವಿಲೇವಾರಿಗೆ ಭೂ ಖರೀದಿಗಾಗಿ ನಿಗದಿಪಡಿಸಲಾದ ಅನುದಾನದಲ್ಲಿ ಅವ್ಯವಹಾರ ಎಸಗಿರುವ ಕುರಿತು ಮಂಡ್ಯ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸದರಿ ಜಿಲ್ಲಾ ಪಂಚಾಯತಿಯ ಲೆಕ್ಕಪತ್ರ ವಿಭಾಗದ ಮುಖ್ಯಸ್ಥರ ನೇತೃತ್ವದಲ್ಲಿ ಮಂಡ್ಯ ಜಿಲ್ಲಾ ಪಂಚಾಯತಿ ವ್ಯಾಪ್ತಿಯ 7 ತಾಲ್ಲೂಕು ಪಂಚಾಯತಿಗಳ ವಿಶೇಷ ತಪಾಸಣೆಯನ್ನು ಜರುಗಿಸಿದ್ದು, ಸದರಿ ತಪಾಸಣಾ ತಂಡವು ನೀಡಿದ ವರದಿಯನ್ವಯ ಪ್ರಚಾರ ಸಾಮಗ್ರಿ ಮತ್ತು ಇತರೆ ಸಾಮಗ್ರಿಗಳ ಖರೀದಿಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ನಿಯಮಗಳು, 1999ನ್ನು ಪಾಲಿಸದಿರುವ ಬಗ್ಗೆ ಹಾಗೂ ಯೋಜನೆಗಳ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ಬಗ್ಗೆ ಮತ್ತು ಸರ್ಕಾರವು ಹೊರಡಿಸಿರುವ ಆದೇಶ/ಸುತ್ತೋಲೆಗಳನ್ನು ಅನುಸರಿಸದೇ ನೇರವಾಗಿ ದರಪಟ್ಟಿ ಕರೆದು, ಸಾಮಗ್ರಿಗಳ ಖರೀದಿಯಲ್ಲಿ ಅವ್ಯವಹಾರ ನಡೆಸಿ, ಕರ್ತವ್ಯ ನಿರ್ಲಕ್ಷತೆ ಎಸಗಿದ ಶ್ರೀ ಎಸ್.ವಿ. ಪದ್ಮನಾಭ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀರಂಗಪಟ್ಟಣ, ಇವರು ಸೇರಿದಂತೆ ಇತರೆ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 12(1)(ಎ)ರಡಿಯಲ್ಲಿ ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ 11-05-2011ರಂದು ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣೆ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ದಿನಾಂಕ 14-06-2011ರ ಆದೇಶದಲ್ಲಿ ಶ್ರೀ ಎಸ್.ವಿ. ಪದ್ಮನಾಭ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀರಂಗಪಟ್ಟಣ ಇವರು ಸೇರಿದಂತೆ ಇತರೆ ಅಧಿಕಾರಿಗಳನ್ನು ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ:(3)ರಲ್ಲಿ ಓದಲಾದ ದಿನಾಂಕ 11-11-2011ರ ಆದೇಶದಲ್ಲಿ ಶ್ರೀ ಎಸ್.ವಿ. ಪದ್ಮನಾಭ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀರಂಗಪಟ್ಟಣ ಇವರ ಅಮಾನತ್ತು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ:(4)ರಲ್ಲಿ ಓದಲಾದ ದಿನಾಂಕ 26-06-2015ರ ಆದೇಶದಲ್ಲಿ ಶ್ರೀ ಎಸ್.ವಿ. ಪದ್ಮನಾಭ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀರಂಗಪಟ್ಟಣ ಇವರಿಂದ ಆಗಿರುವ ನಷ್ಟದ ಮೊತ್ತ ರೂ.10,80,535-00ಗಳನ್ನು ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿ1957ರ ನಿಯಮ 8(iv) ರಡಿ ಪ್ರದತ್ತವಾದ ಅಧಿಕಾರದನ್ವಯ ಅವರ ವೇತನದಿಂದ ವಸೂಲಿ

.....2

ಮಾಡಲು ಮತ್ತು ಇದೇ ನಿಯಮಾವಳಿ ನಿಯಮ 8(iii) ರಡಿ ಪ್ರದತ್ತವಾದ ಅಧಿಕಾರದನ್ವಯ 2 ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ ದಂಡನೆ ವಿಧಿಸಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ:(5)ರಲ್ಲಿ ಓದಲಾದ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ: 06-12-2016ರ ಆದೇಶದಲ್ಲಿ ಶ್ರೀ ಎಸ್.ವಿ. ಪದ್ಮನಾಭ ಇವರಿಗೆ ವಿಧಿಸಿದ ದಂಡನೆಯ ಆದೇಶವನ್ನು ರದ್ದುಪಡಿಸಿದೆ.

ಮೇಲೆ ಕ್ರಮ ಸಂಖ್ಯೆ: (6)ರಲ್ಲಿ ಓದಲಾದ ದಿನಾಂಕ:05-05-2017ರ ಆದೇಶದಲ್ಲಿ ಶ್ರೀ ಎಸ್.ವಿ. ಪದ್ಮನಾಭ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀರಂಗಪಟ್ಟಣ ಇವರಿಗೆ ಮಾತ್ರ ಸೀಮಿತವಾಗಿ ಇವರ ವಿರುದ್ಧದ ದಿನಾಂಕ 26-06-2015ರ ದಂಡನಾದೇಶವನ್ನು ಹಿಂಪಡೆಯಲಾಗಿದೆ.

ಮೇಲೆ ಕ್ರಮ ಸಂಖ್ಯೆ: (7)ರಲ್ಲಿ ಓದಲಾದ ದಿನಾಂಕ:18-05-2017ರ ಪತ್ರದಲ್ಲಿ ಶ್ರೀ ಎಸ್.ವಿ. ಪದ್ಮನಾಭ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀರಂಗಪಟ್ಟಣ ಇವರು ಸರ್ಕಾರಕ್ಕೆ ಮನವಿ ಸಲ್ಲಿಸಿ, ತಮ್ಮ ಅಮಾನತ್ತು ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಲು ಕೋರಿರುತ್ತಾರೆ.

ಸರ್ಕಾರವು ಸದರಿಯವರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಶ್ರೀ ಎಸ್.ವಿ. ಪದ್ಮನಾಭ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀರಂಗಪಟ್ಟಣ ಇವರ ವಿರುದ್ಧದ ದಂಡನೆ ಆದೇಶವನ್ನು ಹಿಂದಕ್ಕೆ ಪಡೆದಿರುವುದರಿಂದ,ಸದರಿಯವರು ದಿ:14-06-2011 ರಿಂದ 06-10-2011ರವರೆಗೆ ಕಳೆದ ಅಮಾನತ್ತು ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು 100(3)ರ ಅನ್ವಯ ಕರ್ತವ್ಯದ ಅವಧಿಯೆಂದು ಪರಿಗಣಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 122 ವಿಸೇಬಿ 2017 ಬೆಂಗಳೂರು ದಿನಾಂಕ:24-07-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಶ್ರೀ ಎಸ್.ವಿ.ಪದ್ಮನಾಭ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಶ್ರೀರಂಗಪಟ್ಟಣ ಇವರು ಅಮಾನತ್ತಿನಲ್ಲಿ ಕಳೆದ ದಿನಾಂಕ:14-06-2011 ರಿಂದ 06-10-2011 ರವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು 100(3)ರನ್ವಯ ಕರ್ತವ್ಯದ ಅವಧಿಯೆಂದು ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ರಂಗನಗೌಡ) 24/7/2017
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ. ಬಿ&ಸಿ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ
3. ಶ್ರೀ ಎಸ್.ವಿ. ಪದ್ಮನಾಭ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಉಪವಿಭಾಗ, ಯಳಂದೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) /ಜಂಟಿ ಕಾರ್ಯದರ್ಶಿ (ಆಡಳಿತ)/ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
5. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
6. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.